ದೂರವಾಣಿ: 2419677/2419361
ಫ್ಯಾಕ್ಸ್: 0821-2419363/2419301

ಇ–ಮೇಲ್: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು–570 005

---

## ಹೊಸ ಸಂಯೋಜನೆ ಮಂಜೂರಾತಿ ಆದೇಶ

ವಿಷಯ: 2024–25ನೇ ಶೈಕ್ಷಣಿಕ ಸಾಲಿನಿಂದ ಮೈಸೂರು ಜಿಲ್ಲೆ ಕಾವೇರಿ ಕಾಲೇಜ್ ಆಫ್ ಲೈಫ್ ಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್. ಕಾಲೇಜಿನಲ್ಲಿ ಎಂ.ಸಿ.ಎ ಮತ್ತು ಎಂ.ಬಿ.ಎ ಸ್ನಾತಕೋತ್ತರ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ:
1) ಸ್ಥಳೀಯ ವಿಚಾರಣಾ ಸಮಿತಿ ಭೇಟಿ ನೀಡಿದ ದಿನಾಂಕ: 08.06.2024
2) ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ ದಿನಾಂಕ 11.06.2024
3) ಸಿಂಡಿಕೇಟ್ ಸಭೆಯ ನಿರ್ಣಯದ ದಿನಾಂಕ 12.06.2024
4) ಸರ್ಕಾರಕ್ಕೆ ಕಳುಹಿಸಿರುವ ಪ್ರಸ್ತಾವನೆ ಸಂಖ್ಯೆ ಸಿಡಿಸಿ–3/65/2024–25 ದಿನಾಂಕ 21.06.2024
5) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆದೇಶ ಸಂಖ್ಯೆ ಇಡಿ 67 ಯುಎಂವಿ 2024 ದಿನಾಂಕ 08.08.2024
6) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ತಿದ್ದುಪಡಿ ಆದೇಶ ಸಂಖ್ಯೆ ಇಡಿ 67 ಯುಎಂವಿ 2024 ದಿನಾಂಕ 13.09.2024

* * * * *

**ಆದೇಶ ಸಂಖ್ಯೆ ಸಿಡಿಸಿ–1/ಪಿ.ಜಿ.–172/2024–25 ದಿನಾಂಕ 17.09.2024**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ 59ನೇ ಪ್ರಕರಣದ (11)ನೇ ಉಪ ಪ್ರಕರಣದಡಿಯಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಉಲ್ಲೇಖ 5ರ ಆದೇಶದನ್ವಯ 2024–25ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ಮೈಸೂರು ಜಿಲ್ಲೆ **ಕಾವೇರಿ ಕಾಲೇಜ್ ಆಫ್ ಲೈಫ್ ಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್** ಕಾಲೇಜಿನಲ್ಲಿ **ಎಂ.ಸಿ.ಎ ಮತ್ತು ಎಂ.ಬಿ.ಎ ಸ್ನಾತಕೋತ್ತರ ಕೋರ್ಸ್‌ನ್ನು** ಹೊಸದಾಗಿ ಪ್ರಾರಂಭಿಸಲು ತಾತ್ಕಾಲಿಕ ಸಂಯೋಜನಾ ಮಂಜೂರಾತಿ ಆದೇಶ ನೀಡಲಾಗಿದೆ.

| ಕ್ರಸಂ | ಕೋರ್ಸು | ವಿಭಾಗ | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | ಎಂ.ಸಿ.ಎ | 01 | 120 |
| 2 | ಎಂ.ಬಿ.ಎ | 01 | 120 |

**ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಷರತ್ತುಗಳು:**

- The College should recruit qualified teachers to run MBA and MCA programmes and enrich library with sufficient reference books.

**ಸರ್ಕಾರ ವಿಧಿಸಿರುವ ಷರತ್ತುಗಳು:**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಎಂ.ಸಿ.ಎ ಮತ್ತು ಎಂ.ಬಿ.ಎ ಸ್ನಾತಕೋತ್ತರ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ; ಅದನ್ನು ಶಾಶ್ವತ ಅನುದಾನರಹಿತ ಕೋರ್ಸುಗಳು ಎಂದು ಪರಿಗಣಿಸತಕ್ಕದ್ದು.
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾನಿಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
5. **ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.**

ಮು.ಪು.ನೋ.,

6. ಕಾಲೇಜು/ಆಡಳಿತ ಮಂಡಳಿಯು ಶೇ.50ರಷ್ಟು ವಿಶ್ವವಿದ್ಯಾನಿಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾನಿಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು. ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕ /ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ 13.8.1997ರಂದು ವಿಶಾಖ V/s ರಾಜಸ್ತಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (cognizable offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸತಕ್ಕದ್ದು; ಮುಂದುವರೆದು ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ / ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾನಿಲಯ ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅವನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಭೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;
11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
13. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.
14. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(3)ರಲ್ಲಿನ ನಿಬಂಧನೆಗೊಳಪಟ್ಟಂತೆ ಹಾಗೂ ಸ್ಥಳೀಯ ವಿಚಾರಣಾ ಸಮಿತಿ ವರದಿಯ ಶಿಫಾರಸ್ಸಿನಲ್ಲಿ ಒಳಗೊಂಡಿರುವ ಷರತ್ತುಗಳನ್ನು ಕಡ್ಡಾಯವಾಗಿ ಈ ಶೈಕ್ಷಣಿಕ ಸಾಲಿನಲ್ಲಿಯೇ ಅನುಸರಿಸತಕ್ಕದ್ದು.
15. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(12)ರನ್ವಯ ಸೂಕ್ತ ಆದೇಶಗಳನ್ನು ವಿಶ್ವವಿದ್ಯಾಲಯದಿಂದ ಹೊರಡಿಸತಕ್ಕದ್ದು.

ವಿಶ್ವವಿದ್ಯಾನಿಲಯದ ಶೈಕ್ಷಣಿಕ ವೇಳಾಪಟ್ಟಿಯ ಪ್ರಕಾರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದು. ವಿಶ್ವವಿದ್ಯಾನಿಲಯ ಹಾಗೂ ಸರ್ಕಾರದ ಷರತ್ತುಗಳನ್ನು ಕಾರ್ಯಗತ ಮಾಡಲು ಕಾರ್ಯಪ್ರವೃತ್ತರಾಗುವುದು ಹಾಗೂ ಈ ಸಂಬಂಧ **ಅಗತ್ಯ ದಾಖಲೆಗಳೊಡನೆ ಅನುಪಾಲನಾ ವರದಿಯನ್ನು** ಈ ಪತ್ರ ತಲುಪಿದ ಕೂಡಲೇ ಕಾಲೇಜು ಅಭಿವೃದ್ಧಿ ಮಂಡಳಿ ಕಛೇರಿಗೆ ಕಳುಹಿಸಲು ಕೋರಿದೆ. ಪರೀಕ್ಷಾ ನಿಯಮ/ ಪ್ರವೇಶಾತಿ / ಮೀಸಲಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಸಹಿ/- UR 17/9/2024
ಕುಲಸಚಿವ

ಗೆ,

ಪ್ರಾಂಶುಪಾಲರು
**ಕಾವೇರಿ ಕಾಲೇಜ್ ಆಫ್ ಲೈಫ್ ಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್,**
ನಂ. 131, 2ಡಿ, 2ಇ, 2ಎಫ್,
ಕೆ.ಬಿ.ಎಲ್. ಲೇಔಟ್, ಬನ್ನೂರು ರಿಂಗ್ ರಸ್ತೆ ವೃತ್ತ,
ಆಲನಹಳ್ಳಿ, ಮೈಸೂರು–570028

**ಪ್ರತಿಗಳು:**

1) ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್.ಅಂಬೇಡ್ಕರ್ ರಸ್ತೆ, ಬೆಂಗಳೂರು–560 001.
2) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು–560 001.
3) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು–560 001.
4) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಜೆ.ಎಲ್.ಬಿ.ರಸ್ತೆ, ಮೈಸೂರು.
5) ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6) ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7) ಉಪಕುಲಸಚಿವರು (ಶೈಕ್ಷಣಿಕ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8) ಅಧೀಕ್ಷಕರು, ಸಿಡಿಸಿ/ಕಛೇರಿ ಪ್ರತಿ/ರಕ್ಷಾ ಕಡತಕ್ಕೆ.